(ಸದನವು 11 ಗಂಟೆ 17 ನಿಮಿಷಕ್ಕೆ ಪ್ರಾರಂಭವಾಯಿತು ಮಾನ್ಯ ಸಭಾಧ್ಯಕ್ಷರು ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು)

ಶ್ರೀ ವಿ.ಸುನೀಲ್ ಕುಮಾರ್: ಮಾನ್ಯ ಅಧ್ಯಕ್ಷರೆ, ಕಸ್ತೂರಿ ರಂಗನ್ ವರದಿಯ ಬಗ್ಗೆ ಇಡೀ ರಾಜ್ಯದಲ್ಲಿ ಬಹಳ ದೊಡ್ಡ ಚರ್ಚೆಯಾಗಿ ಈ ಬಗ್ಗೆ ನಮ್ಮ ಜಿಲ್ಲೆಗಳಲ್ಲಿ ಪ್ರತಿಭಟನೆಗಳು ಆಗುತ್ತಿದೆ.

ಅಧ್ಯಕ್ಷರು: ತಾವು ಒಂದು ನಿಮಿಷ ತಾಳಿ. ಈಗ ನಾನು ಹುಟ್ಟು ಹಬ್ಬದ ಶುಭಾಶಯಗಳನ್ನು ಹೇಳುತ್ತೇನೆ.

(ಗೊಂದಲ)

ಶ್ರೀ ವಿ.ಸುನೀಲ್ ಕುಮಾರ್: ಮಾನ್ಯ ಅಧ್ಯಕ್ಷರೆ, ನಾನು ಒಂದು ನಿಲುವಳಿ ಸೂಚನೆಯನ್ನು ಕೊಟ್ಟಿದ್ದೇನೆ. ತಾವು ನಾನು ಮಾತನಾಡುವುದಕ್ಕೆ ಅವಕಾಶವನ್ನು ಕೊಡಬೇಕು.

ಅಧ್ಯಕ್ಷರು: ಒಂದು ನಿಮಿಷ ತಾಳಿ. ನಾನು ಹುಟ್ಟುಹಬ್ಬದ ಶುಭಾಷಯಗಳನ್ನು ಹೇಳುತ್ತೇನೆ.

(ಗೊಂದಲ)

1. ಹುಟ್ಟುಹಬ್ಬದ ಶುಭಾಶಯಗಳು

ಅಧ್ಯಕ್ಷರು: ಈ ದಿನ ದಿನಾಂಕ:10.12.2014ರಂದು ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುತ್ತಿರುವ ಸದನದ ಸದಸ್ಯರುಗಳಾಗಿರುವ ಶ್ರೀ ಆರ್.ಜಗದೀಶ್ ಕುಮಾರ್ ಮತ್ತು ಶ್ರೀ ಹೆಚ್.ಎಸ್.ಶಿವಶಂಕರ್ ಇವರುಗಳಿಗೆ ಜನ್ಮ ದಿನದ ಶುಭಾಶಯಗಳು. ಈ ಸಂದರ್ಭದಲ್ಲಿ ಭಗವಂತನು ತಮಗೆ ಆಯುರಾರೋಗ್ಯ ಐಶ್ವರ್ಯಾದಿಗಳನ್ನು ದಯಪಾಲಿಸಲೆಂದು ಹಾರೈಸುತ್ತೇನೆ. ಇನ್ನೊಂದು ಪ್ರಕಟಣೆ ಇದೆ.